**ಕರ್ನಾಟಕ ವಿಧಾನಸಭೆ**
**ಹದಿನಾರನೇ ವಿಧಾನಸಭೆ**
**ಮೊದಲನೇ ಅಧಿವೇಶನ**
**(ಮುಂದುವರೆದ ಉಪವೇಶನ)**

# ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ, 2023

**(2023ರ ವಿಧಾನಸಭೆಯ ವಿಧೇಯಕ ಸಂಖ್ಯೆ–05)**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 (2000ರ ಕರ್ನಾಟಕ ಅಧಿನಿಯಮ 29)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ನಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2023 ಎಂದು ಕರೆಯತಕ್ಕದ್ದು.

(2) ಇದು 2023ರ ಮಾರ್ಚ್ 29ನೇ ದಿನಾಂಕದಂದು ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

**2. 6ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 (2000ರ ಕರ್ನಾಟಕ ಅಧಿನಿಯಮ 29)ರ 6ನೇ ಪ್ರಕರಣದಲ್ಲಿನ ಮೊದಲನೇ ಪರಂತುಕದಲ್ಲಿ "50 ಲಕ್ಷ ರೂಪಾಯಿಗಳಿಗೆ" ಎಂಬ ಪದಗಳು ಮತ್ತು ಅಂಕಿಗಳ ಬದಲಿಗೆ "1.00 ಕೋಟಿ ರೂಪಾಯಿಗಳಿಗೆ" ಎಂಬ ಪದಗಳು ಮತ್ತು ಅಂಕಿಗಳನ್ನು ಪ್ರತಿಯೋಜಿಸತಕ್ಕದ್ದು.

**3. ನಿರಸನ ಮತ್ತು ಉಳಿಸುವಿಕೆಗಳು.-** (1) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧ್ಯಾದೇಶ, 2023 (2023ರ ಕರ್ನಾಟಕ ಅಧ್ಯಾದೇಶ ಸಂ. 02)ನ್ನು ಈ ಮೂಲಕ ನಿರಸನಗೊಳಿಸಲಾಗಿದೆ.

(2) ಅಂಥ ನಿರಸನವು ಏನೇ ಒಳಗೊಂಡಿದ್ದರೂ ಸದರಿ ಅಧ್ಯಾದೇಶದ ಅಡಿಯಲ್ಲಿ ಏನೇ ಮಾಡಿದ್ದರೂ ಅಥವಾ ಯಾವುದೇ ಕ್ರಮವನ್ನು ಕೈಗೊಂಡಿದ್ದರೂ ಈ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ವ್ಯಕ್ತಿಗಳು ಕೈಗೊಳ್ಳಲಾದ ನಿರ್ಮಾಣ ಕಾಮಗಾರಿಗಳ ಮೊತ್ತವನ್ನು ಐವತ್ತು ಲಕ್ಷ ರೂಪಾಯಿಗಳಿಂದ ಒಂದು ಕೋಟಿ ರೂಪಾಯಿಗಳಿಗೆ ಹೆಚ್ಚಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 (2000ರ ಕರ್ನಾಟಕ ಅಧಿನಿಯಮ 29)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ವಿಷಯವು ತುರ್ತುಸ್ವರೂಪದ್ದಾದ್ದರಿಂದ ಮತ್ತು ಕರ್ನಾಟಕ ವಿಧಾನಮಂಡಲದ ಉಭಯ ಸದನಗಳು ಅಧಿವೇಶನದಲ್ಲಿ ಇಲ್ಲದಿದ್ದುದರಿಂದ, ಮೇಲಿನ ಉದ್ದೇಶವನ್ನು ಸಾಧಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧ್ಯಾದೇಶ, 2023 (2023ರ ಕರ್ನಾಟಕ ಅಧ್ಯಾದೇಶ ಸಂ. 02)ನ್ನು ಪ್ರಖ್ಯಾಪಿಸಲಾಗಿತ್ತು.

ಈ ವಿಧೇಯಕವು ಅಧ್ಯಾದೇಶದ ಬದಲಿ ವಿಧೇಯಕವಾಗಿದೆ.

ಆದ್ದರಿಂದ ಈ ವಿಧೇಯಕ.

**ಆರ್ಥಿಕ ಜ್ಞಾಪನ ಪತ್ರ**

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಹೆಚ್ಚಿನ ಆರ್ಥಿಕ ವೆಚ್ಚನ್ನು ಒಳಗೊಂಡಿರುವುದಿಲ್ಲ.

**ಕರ್ನಾಟಕ ವಿಧಾನ ಸಭೆಯ ಕಾರ್ಯ ವಿಧಾನ ಮತ್ತು ನಡವಳಿಕೆ ನಿಯಮಗಳ 80ನೇ ನಿಯಮದ (1)ನೇ ಉಪನಿಯಮದ ಮೂಲಕ ಅಗತ್ಯಪಡಿಸಲಾದಂತೆ ವಿವರಣಾತ್ಮಕ ಹೇಳಿಕೆ.**

ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ವ್ಯಕ್ತಿಗಳು ಕೈಗೊಳ್ಳಲಾದ ನಿರ್ಮಾಣ ಕಾಮಗಾರಿಗಳ ಮೊತ್ತವನ್ನು ಐವತ್ತು ಸಾವಿರ ರೂಪಾಯಿಗಳಿಂದ ಒಂದು ಕೋಟಿ ರೂಪಾಯಿಗಳಿಗೆ ಹೆಚ್ಚಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 (2000ರ ಕರ್ನಾಟಕ ಅಧಿನಿಯಮ 29)ನ್ನು ಮತ್ತಷ್ಟು ತಿದ್ದುಪಡಿಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ವಿಷಯವು ತುರ್ತುಸ್ವರೂಪದ್ದಾದ್ದರಿಂದ ಮತ್ತು ಕರ್ನಾಟಕ ವಿಧಾನಮಂಡಲದ ಉಭಯ ಸದನಗಳು ಅಧಿವೇಶನದಲ್ಲಿ ಇಲ್ಲದಿದ್ದುದರಿಂದ, ಮೇಲಿನ ಉದ್ದೇಶವನ್ನು ಸಾಧಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧ್ಯಾದೇಶ, 2023 (2023ರ ಕರ್ನಾಟಕ ಅಧ್ಯಾದೇಶ ಸಂ. 02)ನ್ನು ಪ್ರಖ್ಯಾಪಿಸಲಾಗಿತ್ತು.

ಈ ವಿಧೇಯಕವು ಅಧ್ಯಾದೇಶದ ಬದಲಿ ವಿಧೇಯಕವಾಗಿದೆ.

**ಸಿದ್ದರಾಮಯ್ಯ**
ಮುಖ್ಯಮಂತ್ರಿ

**ಎಂ.ಕೆ. ವಿಶಾಲಾಕ್ಷಿ**
ಕಾರ್ಯದರ್ಶಿ
ಕರ್ನಾಟಕ ವಿಧಾನಸಭೆ

## ಅನುಬಂಧ

## ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 (2000ರ ಕರ್ನಾಟಕ ಅಧಿನಿಯಮ 29)ರ ಉದ್ಧೃತಭಾಗ

**X X XX XX**

**6. ಸಂಗ್ರಹಣ ಸಂಸ್ಥೆಗಳು ಕಾರ್ಯವಿಧಾನವನ್ನು ಅನುಸರಿಸುವುದು.-** ಈ ಅಧಿನಿಯಮದಲ್ಲಿ ಅಥವಾ ಇದರಡಿ ರಚಿಸಿದ ನಿಯಮಗಳಲ್ಲಿ ನಿರೂಪಿಸಲಾದ ಕಾರ್ಯ ವಿಧಾನಕ್ಕನುಸಾರವಾಗಿಯಲ್ಲದೆ ಈ ಅಧಿನಿಯಮದ ಪ್ರಾರಂಭದ ತರುವಾಯ ಒಂದು ಸಂಗ್ರಹಣಾ ಸಂಸ್ಥೆಯು ಯಾವುದೇ ಟೆಂಡರನ್ನು ಆಹ್ವಾನಿಸತಕ್ಕದ್ದಲ್ಲ, ಪ್ರಕ್ರಿಯೆಗೊಳಪಡಿಸತಕ್ಕದ್ದಲ್ಲ ಅಥವಾ ಅಂಗೀಕರಿಸತಕ್ಕದ್ದಲ್ಲ.

ಪರಂತು, ಟೆಂಡರ್ ಆಹ್ವಾನಿಸುವ ಪ್ರಾಧಿಕಾರವು, ಅಧಿಸೂಚಿತ ಇಲಾಖೆಗಳಲ್ಲಿ ನಿಯಮಿಸಿದ ಪ್ರಕ್ರಿಯೆಗಳನ್ನು ಅನುಸರಿಸುವ ಮೂಲಕ ಕೈಗೊಳ್ಳಬೇಕಾದ ಅಗತ್ಯ ನೋಟೀಸುಗಳು, ಪತ್ರ ವ್ಯವಹಾರಗಳು ಮತ್ತು ಪ್ರಕಟಣೆಗಳನ್ನು ಹೊರಡಿಸುವಾಗ ನಿರ್ಮಾಣ ಕಾಮಗಾರಿಗಳ ಮೌಲ್ಯ ೫೦ ಲಕ್ಷ ರೂಪಾಯಿಗಳಿಗೆ ಮೀರದ ಅಂಥ ಕಾಮಗಾರಿಗಳ ಶೇಕಡ 17.15ರಷ್ಟು ಸಂಖ್ಯೆಯನ್ನು ಮೀರದಂತೆ ಅನುಸೂಚಿತ ಜಾತಿಗಳ ವರ್ಗಕ್ಕೆ ಸೇರಿದವರಿಗೆ ಟೆಂಡರುದಾರರುಗಳ ಪೈಕಿ ಮಾತ್ರ ಟೆಂಡರನ್ನು ನೀಡತಕ್ಕದ್ದು ಮತ್ತು ಅಂಥ ಕಾಮಗಾರಿಗಳ ಶೇಕಡ 6.95ರಷ್ಟು ಸಂಖ್ಯೆಯನ್ನು ಮೀರದಂತೆ ಅನುಸೂಚಿತ ಪಂಗಡಗಳ ವರ್ಗಕ್ಕೆ ಸೇರಿದವರಿಗೆ ಟೆಂಡರುದಾರರುಗಳ ಪೈಕಿ ಮಾತ್ರ ಟೆಂಡರನ್ನು ನೀಡತಕ್ಕದ್ದು:

ಮತ್ತು ಪರಂತು, ಎರಡು ಬಾರಿಗಳಲ್ಲಿ ಆಹ್ವಾನಿಸಿರುವುದಕ್ಕೆ ಪ್ರತಿಕ್ರಿಯೆಯಾಗಿ ಅನುಸೂಚಿತ ಜಾತಿಗಳು ಅಥವಾ ಸಂದರ್ಭಾನುಸಾರವಾಗಿ ಅನುಸೂಚಿತ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಂದ ಟೆಂಡರ್ ಸ್ವೀಕರಿಸದಿದ್ದಲ್ಲಿ, ಅಂಥ ಕಾಮಗಾರಿಗಳನ್ನು ಇತರರಿಗೆ ಟೆಂಡರ್ ನೀಡಬಹುದು.

**X X XX XX**

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು, ೩೬, ಕಾಸೂ , ಪ್ರತಿಗಳು 500, 03ನೇ ಜುಲೈ, 2023